Akashvani: Bangalore
Regional Bulletin In Kannada
22.12.2025 : 14.30hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜ್ಯದಲ್ಲಿ ಶಾಂತಿ ನೆಲೆಸಲೆಂದು ಪ್ರಚೋದನಕಾರಿ ಭಾಷಣಕ್ಕೆ ಕಡಿವಾಣ; ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥನೆ
- ಎಪಿಎಲ್ ಕಾರ್ಡ್, ಬಿಪಿಎಲ್ ಆಗಿ ಪರಿವರ್ತಿಸಲು ತಹಸೀಲ್ದಾರ್‌ಗೆ ಅಧಿಕಾರ - ಸಚಿವ ಕೆ.ಎಚ್. ಮುನಿಯಪ್ಪ
- ದೇವನಹಳ್ಳಿಯ ಫಾಕ್ಸ್‌ಕಾನ್ ಕಂಪನಿಯಲ್ಲಿ ಶೇಕಡ ೮೦ರಷ್ಟು ಮಹಿಳೆಯರ ನೇಮಕ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಶ್ಲಾಘನೆ
- ರಾಜ್ಯ ಸರ್ಕಾರ ಜನರ ಸಂಕಷ್ಟಕ್ಕೆ ಪ್ರಾಮಾಣಿಕವಾಗಿ ಸ್ಪಂದಿಸಲಿ - ಸರ್ಕಾರಕ್ಕೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಸಲಹೆ

*******

ರಾಜ್ಯದಲ್ಲಿ ಶಾಂತಿ ನೆಲೆಸಲೆಂದು ಪ್ರಚೋದನಕಾರಿ ಭಾಷಣಕ್ಕೆ ಕಡಿವಾಣ ಹಾಕಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪುನರುಚ್ಚರಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳಗಾವಿಯಲ್ಲಿ ಶಾಂತಿಯುತವಾಗಿ ಅಧಿವೇಶನ ನಡೆಸಲಾಗಿದೆ ಎಂದು ಹೇಳಿದ್ದಾರೆ. ಪ್ರಚೋದನಕಾರಿ ಭಾಷಣ ಮಾಡದಂತೆ ಜಾರಿಯಾಗಿರುವ ಮಸೂದೆಯು ಎಲ್ಲಾ ಪಕ್ಷಗಳ ನಾಯಕರುಗಳಿಗೂ ಅನ್ವಯವಾಗಲಿದೆ. ರಾಜ್ಯದಲ್ಲಿ ಶಾಂತಿ ನೆಲೆಸಬೇಕೆಂಬ ಹಿನ್ನೆಲೆಯಲ್ಲಿ ಇದನ್ನು ಜಾರಿ ಮಾಡಲಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

*** ಧ್ವನಿ **** ಮುಖ್ಯಮಂತ್ರಿ

ಗೃಹಲಕ್ಷ್ಮಿ ಯೋಜನೆಯ ಹಣ ಶೀಘ್ರದಲ್ಲೇ ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ನಾಯಕತ್ವ ಬದಲಾವಣೆ ಪಕ್ಷದ ಹೈ ಕಮಾಂಡ್‌ಗೆ ಬಿಟ್ಟ ವಿಚಾರವಾಗಿದ್ದು, ಇದರಲ್ಲಿ ಯಾವುದೇ ಗೊಂದಲಗಳಿಲ್ಲ ಎಂದು ಹೇಳಿದ್ದಾರೆ.

*******

ಬಿಪಿಎಲ್ ಕಾರ್ಡ್ ಎಪಿಎಲ್ ಆಗಿದ್ದರೆ ಅಂತಹವರು ಅರ್ಜಿ ಸಲ್ಲಿಸಿದ ೧೫ ದಿನಗಳಲ್ಲಿ ಸೂಕ್ತ ಪರಿಶೀಲನೆ ನಡೆಸಿ ಮತ್ತೆ ಬಿಪಿಎಲ್ ಕಾರ್ಡ್‌ಗಳನ್ನಾಗಿಸುವ ಅಧಿಕಾರವನ್ನು ತಹಶೀಲ್ದಾರ್‌ಗೆ ನೀಡಲಾಗಿದೆ ಎಂದು ಆಹಾರ ನಾಗರಿಕ ಸರಬರಾಜು ಸಚಿವ ಕೆ.ಹೆಚ್ ಮುನಿಯಪ್ಪ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿ ಅನಾವರಣಗೊಳಿಸಿ ಮಾತನಾಡಿದ ಅವರು, ಅರ್ಹ ಬಿಪಿಎಲ್ ಕಾರ್ಡ್ ಪಡಿತರದಾರರು ಯಾವುದೇ ಕಾರಣಕ್ಕೂ ಸೌಲಭ್ಯದಿಂದ ವಂಚಿತರಾಗುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಡಾ.ಬಿ.ಆರ್.ಅಂಬೇಡ್ಕರ್ ಅವರು ದೇಶಕ್ಕೆ ನೀಡಿರುವ ಸಂವಿಧಾನ ನಮ್ಮೆಲ್ಲರ ಬದುಕಿನ ಆಧಾರ ಸ್ತಂಭವಾಗಿದೆ ಎಂದು ತಿಳಿಸಿದ್ದಾರೆ.

*******

ಬೆಂಗಳೂರಿನ ದೇವನಹಳ್ಳಿಯ ತೈವಾನ್ ಮೂಲದ ಕಂಪನಿ ಫಾಕ್ಸ್‌ಕಾನ್ ಕೇವಲ ೬ ತಿಂಗಳಲ್ಲಿ ಸುಮಾರು ೩೦ ಸಾವಿರ ಉದ್ಯೋಗಿಗಳನ್ನು ನೇಮಕ ಮಾಡಿಕೊಂಡಿದೆ. ಇದರಲ್ಲಿ ಶೇಕಡ ೮೦ರಷ್ಟು ಮಹಿಳೆಯರು ಸೇರಿದ್ದಾರೆ. ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಮಹಿಳೆಯರ ನೇತೃತ್ವದ ಈ ಸಂಸ್ಥೆ, ಮುಂದಿನ ಹತ್ತು ವರ್ಷಗಳಲ್ಲಿ ಊಹಿಸಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಎಲೆಕ್ಟ್ರಾನಿಕ್ಸ್ ವಲಯವು ವಿಶೇಷವಾಗಿ ಮಹಿಳೆಯರಿಗೆ ದೊಡ್ಡ ಪ್ರಮಾಣದ ಕೌಶಲ್ಯಪೂರ್ಣ ಬ್ಲೂ ಕಾಲರ್ ಉದ್ಯೋಗಗಳನ್ನು ಸೃಷ್ಟಿಸುತ್ತಲೇ ಇದೆ ಎಂದು ತಿಳಿಸಿದ್ದಾರೆ.

*******

ರಾಜ್ಯದಲ್ಲಿ ಕೃಷಿಕರು ಹಾಗೂ ಸಾರ್ವಜನಿಕರು ಹಲವು ರೀತಿಯ ಸಂಕಷ್ಟಗಳನ್ನು ಅನುಭವಿಸುತ್ತಿದ್ದು ರಾಜ್ಯ ಸರ್ಕಾರ ಜನರ ಸಂಕಷ್ಟಕ್ಕೆ ಪ್ರಾಮಾಣಿಕವಾಗಿ ಸ್ಪಂದಿಸುವ ಕೆಲಸ ಮಾಡಬೇಕಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ ಕುಮಾರಸ್ವಾಮಿ ತಿಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ಬಾಳೆಹೊನ್ನೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಗೃಹ ಲಕ್ಷ್ಮಿ ಯೋಜನೆಯ ೫ ಸಾವಿರ ಕೋಟಿ ಹಣ ಏನಾಗಿದೆ ಎಂದು ಪ್ರಶ್ನಿಸಿದ್ದಾರೆ. ರಾಜ್ಯದಲ್ಲಿ ಅಭಿವೃದ್ಧಿ ಕೆಲಸಗಳು ಸ್ಥಗಿತಗೊಂಡಿದ್ದು, ಕಳೆದ ೩ ವರ್ಷದಲ್ಲಿ ಗ್ರಾಮೀಣ ಭಾಗದಲ್ಲಿರುವ ಕೃಷಿಕರು ಆನೇಕ ಸಮಸ್ಯೆ ಎದುರಿಸುತ್ತಿದ್ದಾರೆ ಎಂದು ದೂರಿದ್ದಾರೆ.

ಧ್ವನಿ : ಕುಮಾರಸ್ವಾಮಿ

*******

ರಾಜ್ಯದಲ್ಲಿನ ನಾಯಕತ್ವ ಬಿಕ್ಕಟ್ಟನ್ನು ಬಗೆಹರಿಸಲು ಕಾಂಗ್ರೆಸ್ ಹೈಕಮಾಂಡ್ ವಿಫಲವಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವಿನ ಅಧಿಕಾರಕ್ಕಾಗಿ ಹೋರಾಟದಿಂದ ರಾಜ್ಯದ ಅಭಿವೃದ್ಧಿ ಸ್ಥಗಿತಗೊಂಡಿದೆ ಎಂದು ದೂರಿದ್ದಾರೆ.  ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಹಾಗೂ ಎಐಸಿಸಿ ಮುಖಂಡ ಮಲ್ಲಿಕಾರ್ಜುನ ಖರ್ಗೆ, ಇದು ರಾಜ್ಯಮಟ್ಟದಲ್ಲಿ ಸೃಷ್ಟಿಯಾಗಿರುವ ಗೊಂದಲ ಎಂದು ನುಣುಚಿಕೊಳ್ಳುತ್ತಿದ್ದಾರೆ ಎಂದು ತಿಳಿಸಿದ್ದಾರೆ.

*******

ರಾಜ್ಯದಲ್ಲಿ  ನಡೆದ ಪಲ್ಸ್ ಪೋಲಿಯೊ ಅಭಿಯಾನದಲ್ಲಿ ಈವರೆಗೆ ಶೇಕಡ ೯೬ರಷ್ಟು ಲಸಿಕೆ ಹಾಕಲಾಗಿದೆ ಎಂದು ಆರೋಗ್ಯ ಇಲಾಖೆ ಸ್ಪಷ್ಟಪಡಿಸಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಹಮ್ಮಿಕೊಂಡಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಶೇಕಡ ೧೦೧.೫ ಗುರಿ ಮುಟ್ಟುವ ಮೂಲಕ ಯಶಸ್ವಿಯಾಗಿದೆ. ಜಿಲ್ಲೆಯಲ್ಲಿ ೫ ವರ್ಷದೊಳಗಿನ ಒಟ್ಟು ೯೯ ಸಾವಿರ ೮೨೮ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದ್ದು, ಈ ಪೈಕಿ ೧ ಲಕ್ಷದ ೧ ಸಾವಿರದ ೩೫೮ ಮಕ್ಕಳಿಗೆ ಲಸಿಕೆ ಹಾಕಲಾಗಿದೆ. ಹಾವೇರಿ ಜಿಲ್ಲೆಯಾದ್ಯಂತ ರಾಷ್ಟ್ರೀಯ ಪಲ್ಸ್ ಪೋಲಿಯೊ ಅಭಿಯಾನಕ್ಕೆ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಮೊದಲ ದಿನವೇ ಶೇ ೯೫.೫೬ರಷ್ಟು ಮಕ್ಕಳಿಗೆ ಲಸಿಕೆ ನೀಡಲಾಗಿದೆ. ಜಿಲ್ಲೆಯಲ್ಲಿ ಐದು ವರ್ಷದೊಳಗಿನ ವಯಸ್ಸಿನ ೧ ಲಕ್ಷ ೪೮ ಸಾವಿರ ೨೬೩ ಮಕ್ಕಳಿದ್ದು, ಈ ಪೈಕಿ ೧ ಲಕ್ಷ ೪೧ ಸಾವಿರ ೬೭೩ ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಂ. ಜಯಾನಂದ ಮಾಹಿತಿ ನೀಡಿದ್ದಾರೆ.

*******

ಶ್ರೇಷ್ಠ ಗಣಿತ ತಜ್ಞ ಶ್ರೀನಿವಾಸ ರಾಮಾನುಜಂ ಅವರ ಜನ್ಮದಿನದ ಅಂಗವಾಗಿ ಇಂದು ರಾಷ್ಟ್ರೀಯ ಗಣಿತ ದಿನ ಆಚರಿಸಲಾಗುತ್ತಿದೆ. ಈ ದಿನದಂದು ಗಣಿತ ವಿಷಯ ಕಲಿಕೆ ಮತ್ತು ಸಂಶೋಧನೆಗೆ ಮತ್ತಷ್ಟು ಉತ್ತೇಜನ ನೀಡಲಾಗುತ್ತಿದೆ. ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಗಣಿತಶಾಸ್ತ್ರ ವಿಭಾಗದ ವತಿಯಿಂದ ಸೆಂಟ್ರಲ್ ಕಾಲೇಜಿನ ಆವರಣದಲಿ ಶ್ರೀನಿವಾಸ ರಾಮಾನುಜನ್ ಅವರ ಜನ್ಮದಿನದ ಪ್ರಯುಕ್ತ ರಾಷ್ಟ್ರೀಯ ಗಣಿತ ದಿನಾಚರಣೆ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಮೈಸೂರು ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಪ್ರೊ. ಎಸ್. ಭಾರ್ಗವ ಅವರು  "ಶ್ರೀನಿವಾಸ ರಾಮಾನುಜನ್ ಅವರ ಪರಂಪರೆ ಮತ್ತು ಪ್ರಸ್ತುತತೆ"

ಕುರಿತು ವಿಶೇಷ ಉಪನ್ಯಾಸ ನೀಡಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕುಲಪತಿ ಪ್ರೊ. ರಮೇಶ್. ಬಿ. ವೇದಕಾಲದ ಗಣಿತಶಾಸ್ತ್ರದ ಪಾಂಡಿತ್ಯ ಇಂದಿನ ಕೃತಕ ಬುದ್ಧಿಮತ್ತೆಯ ಆಧುನಿಕ ತಂತ್ರಜ್ಞಾನದ ಬುನಾದಿಯಾಗಿದೆ ಎಂದು ವಿಶ್ಲೇಷಿಸಿದರು. ರಾಷ್ಟ್ರದ ಪ್ರಗತಿಗೆ ಅಮೋಘ ಕೊಡುಗೆ ಸಲ್ಲಿಸಿದ ಗಣಿತಶಾಸ್ತ್ರ ವಿದ್ವಾಂಸರಿಗೆ ಅವರು ಗೌರವ ಸಮರ್ಪಿಸಿದರು. ರಾಷ್ಟ್ರೀಯ ಗಣಿತ ದಿನಾಚರಣೆಯ ಅಂಗವಾಗಿ ಅಂತರ್ ಕಾಲೇಜು ಮಟ್ಟದ 'ಮ್ಯಾಥ್-ಓ-ಮೇನಿಯಾ ೨೦೨೫' ಗಣಿತ ಚಮತ್ಕಾರ ಪ್ರತಿಭಾ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ವಿಜೇತ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ಮತ್ತು ಬಹುಮಾನಗಳನ್ನು ವಿತರಿಸಲಾಯಿತು.

*******

ಕೇಂದ್ರ ಸರ್ಕಾರದ ಮಹಾತ್ವಕಾಂಕ್ಷಿ ಯೋಜನೆಯಾದ ಜಿ ರಾಮ್ ಜಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳ್ಳುತ್ತಿದ್ದು, ರೈತರ ಆರ್ಥಿಕ ಸ್ಥಿತಿಯನ್ನು ಉತ್ತಮಗೊಳಿಸುವಲ್ಲಿ ನೆರವಾಗುತ್ತಿದೆ. ಜಿ ರಾಮ್ ಜಿ ಯೋಜನೆ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕನ್ನು ರೇಷ್ಮೆ ಅಭಿವೃದ್ಧಿಯ ಕೇಂದ್ರವಾಗಿ ರೂಪಿಸಲು ಸಹಕಾರಿಯಾಗಿದೆ. ಕೇಂದ್ರ ಸರ್ಕಾರದ ಹಿಪ್ಪುನೇರಳೆ ತೋಟದ ನಿರ್ವಹಣೆಗೆ ಈ ಯೋಜನೆ ಬಹಳ ಸಹಕಾರಿಯಾಗಿದ್ದು, ನನ್ನ ಬದುಕನ್ನೇ ಬದಲಾಯಿಸಿದೆ ಎಂದು ರೈತ ಮನೋಹರ್ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

***ಧ್ವನಿ*** ಮನೋಹರ್, ರೈತ

****END***